ವಿಷಯ:- ಮೀನು ಕೃಷಿಕರ ಅಭಿವೃದ್ಧಿ.

159(176)

ಶ್ರೀ ಹೆಚ್. ಶಿವಪ್ಪ (ಹರಿಹರ):- ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ರಾಜ್ಯದಲ್ಲಿ ಮೀನು ಕೃಷಿಕರ ಅಭಿವೃದ್ಧಿ ಸಂಸ್ಥೆಗಳು (ಮೀನುಗಾರಿಕೆ ಇಲಾಖೆ) ಶುರು ಮಾಡಿರುವ ಮೀನು ಕೊಳಗಳ ಸಂಖ್ಯೆ ಮತ್ತು ನಿರ್ದಿಷ್ಟವಾಗಿ ಚಿತ್ರದುರ್ಗ ಜಿಲ್ಲೆಯ ವಿವರಗಳು;

ಆ) ಈ ಕೊಳ ಮತ್ತು ಕೆರೆಗಳಿಂದ ಆಗುವ ಉತ್ಪನ್ನವೆಷ್ಟು?

ಶ್ರೀ ಕೆ. ಜಯಪ್ರಕಾಶ್ ಹೆಗ್ಡೆ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು):-

ಅ) ಮೀನು ಕೃಷಿಕರ ಅಭಿವೃದ್ಧಿ ಸಂಸ್ಥೆಗಳು ಮೀನು ಕೊಳಗಳನ್ನು ಶುರು ಮಾಡಿರುವುದಿಲ್ಲ. ಆದಾಗ್ಯೂ 659 ಕೊಳ ಮತ್ತು ಕೆರೆಗಳನ್ನು ಮೀನು ಕೃಷಿಕರ ಅಭಿವೃದ್ಧಿ ಸಂಸ್ಥೆಗಳ ಮೀನು ಕೃಷಿಕರು ಅಭಿವೃದ್ಧಿಪಡಿಸಿರುತ್ತಾರೆ. ಚಿತ್ತದುರ್ಗ ಜಿಲ್ಲೆಯು ಈ ಮೀನು ಕೃಷಿಕರ ಅಭಿವೃದ್ಧಿ ಸಂಸ್ಥೆಗಳ ಯೋಜನೆಯ ವ್ಯಾಪ್ತಿಗೆ ಬರುವುದಿಲ್ಲ.

ಆ) ಮೀನು ಕೃಷಿಕರ ಅಭಿವೃದ್ಧಿ ಸಂಸ್ಥೆಗಳ ಮೀನು ಕೃಷಿಕರದಿಂದ 659 ಕೊಳ ಕೆರೆಗಳಿಂದ 3, 173.61 ಮೆಟ್ರಿಕ್‌ಟನ್‌ಗಳಷ್ಟು ಉತ್ಪಾದನೆಯನ್ನು 1995-96 ರಲ್ಲಿ ಮಾಡಲಾಗಿದೆ.

ವಿಷಯ:- ಶಿಥಿಲಾವಸ್ಥೆಯಲ್ಲಿದ್ದ ದೇವಾಲಯಗಳ ಸಂರಕ್ಷಣೆ.

160(177)

ಶ್ರೀ ಹೆಚ್. ಶಿವಪ್ಪ (ಹರಿಹರ):- ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಪುರಾತತ್ವ ಮತ್ತು ವಸ್ತು ಸಂಗ್ರಹಾಲಯ ಇಲಾಖೆಯು ಶಿಥಿಲಾವಸ್ಥೆಯಲ್ಲಿದ್ದ ಎಷ್ಟು ದೇವಾಲಯಗಳನ್ನು ಸಂರಕ್ಷಿಸಿದೆ. (ಜಿಲ್ಲಾವಾರು ವಿವರವನ್ನು ನೀಡುವುದು)?

ಶ್ರೀಮತಿ ಲೀಲಾದೇವಿ ಆರ್. ಪ್ರಸಾದ್ (ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು):-

ಅ) ಕಳೆದ ಮೂರು ವರ್ಷಗಳಲ್ಲಿ ಅಂದರೆ 1. 1.94 ರಿಂದ 31. 12.96 ರವರೆಗೆ ರಾಜ್ಯ ಪುರಾತತ್ವ ಮತ್ತು ಸಂಗ್ರಹಾಲಯ ನಿರ್ದೇಶನಾಲಯವು ಶಿಥಿಲಾವಸ್ಥೆಯಲ್ಲಿದ್ದ ಒಟ್ಟು 60 ಐತಿಹಾಸಿಕ ಸ್ಮಾರಕಗಳನ್ನು ಸಂರಕ್ಷಿಸಲಾಗಿದೆ.

ಜಿಲ್ಲಾವಾರು ಮಾಹಿತಿಯು ಈ ಕೆಳಕಂಡಂತೆ ಇರುತ್ತದೆ.